# ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:-** 2021-22 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ನೀಡಿರುವ ಷೇರುಬಂಡವಾಳ ಅನುದಾನದಲ್ಲಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:-**

1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ: 05.04.2021.
2. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ನಿಅಚೌಅನಿ/ಅ.ವ್ಯ/ಸಿಆರ್-12/2020-21, ದಿ:18.062021.
3. ವ್ಯವಸ್ಥಾಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕಉಅನಿ/ಅ.ವ್ಯ/ಸಿಆರ್-39/2021-22/88, ದಿ:01.10.2021.
4. ವ್ಯವಸ್ಥಾಪಕ ನಿರ್ದೇಶಕರು ,ಕರ್ನಾಟಕ ಅಲೆಮಾರಿ/ ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ, ಇವರ ಪತ್ರ ಸಂಖ್ಯೆ:ಕ.ಅ.ಅ.ಅ.ನಿ/ಯೋ.ಮುಂ/ಸಿಆರ್-1/2021-22, ದಿನಾಂಕ:08.09.2021.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2), (3) ಮತ್ತು (4) ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ, ಇವರುಗಳು ವಿವಿಧ ಯೋಜನೆಗಳಿಗೆ 2021-22ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ 1 ಮತ್ತು 2 ನೇ ಕಂತಿನ ಷೇರುಬಂಡವಾಳವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂಡಿ 05 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 24-11-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ, ನಿಗಮ, ಇವರ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ವಿವಿಧ ಯೋಜನೆಗಳಿಗೆ 2020-21ನೇ ಸಾಲಿಗೆ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಕಂತಿನ ಷೇರು ಬಂಡವಾಳ ಅನುದಾನವನ್ನು ಈ ಕೆಳಗೆ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

2...

1. ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ ಹೆಸರು ಮತ್ತು ಲೆಕ್ಕಶೀರ್ಷಿಕೆ | ಅಯವ್ಯಯದಲ್ಲಿ ನಿಗದಿಗೊಳಿಸಿದ ಅನುದಾನ | ಮೊದಲನೇ ತ್ರೈಮಾಸಿಕ ಕಂತಿನ ಅನುದಾನ | ಎರಡನೇ ತ್ರೈಮಾಸಿಕ ಕಂತಿನ ಅನುದಾನ |
|---|---|---|---|---|
| 1 | ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ಷೇರು ಬಂಡವಾಳ 4225-03-190-0-07-(211) | 75.00 | 18.75 | 18.75 |
| | ಒಟ್ಟು | 75.00 | 18.75 | 18.75 |

2. ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ ಹೆಸರು ಮತ್ತು ಲೆಕ್ಕಶೀರ್ಷಿಕೆ | ಅಯವ್ಯಯದಲ್ಲಿ ನಿಗದಿಗೊಳಿಸಿದ ಅನುದಾನ | ಮೊದಲನೇ ತ್ರೈಮಾಸಿಕ ಕಂತಿನ ಅನುದಾನ | ಎರಡನೇ ತ್ರೈಮಾಸಿಕ ಕಂತಿನ ಅನುದಾನ |
|---|---|---|---|---|
| 1. | ಷೇರು ಬಂಡವಾಳ 4225-03-190-0-06(211) | 29.00 | 0.00 | 14.50 |
| | ಒಟ್ಟು | 29.00 | 0.00 | 14.50 |

3. ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ ಹೆಸರು ಮತ್ತು ಲೆಕ್ಕಶೀರ್ಷಿಕೆ | ಅಯವ್ಯಯದಲ್ಲಿ ನಿಗದಿಗೊಳಿಸಿದ ಅನುದಾನ | ಮೊದಲನೇ ತ್ರೈಮಾಸಿಕ ಕಂತಿನ ಅನುದಾನ | ಎರಡನೇ ತ್ರೈಮಾಸಿಕ ಕಂತಿನ ಅನುದಾನ |
|---|---|---|---|---|
| 1. | ಷೇರು ಬಂಡವಾಳ 4225-03-190-0-08-(211) | 29.00 | 7.25 | 7.25 |
| | ಒಟ್ಟು | 29.00 | 7.25 | 7.25 |

<u>ಷರತ್ತುಗಳು:-</u>

1. ಬಿಡುಗಡೆ ಮಾಡಿರುವ ಅನುದಾನವನ್ನು ಸೆಳೆಯುವ ಪೂರ್ವದಲ್ಲಿ ಸಂಬಂಧಪಟ್ಟ ನಿಗಮಗಳು ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕ್ರಿಯಾಯೋಜನೆಯನ್ನು ರೂಪಿಸಿ ಸರ್ಕಾರದ ಅನುಮೋದನೆ ಪಡೆದ ನಂತರವೇ ಅನುದಾನವನ್ನು ಸೆಳೆಯತಕ್ಕದ್ದು.